ಕರ್ನಾಟಕ ವಿಧಾನ ಪರಿಷತ್ತು

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1291
2	ಸದಸ್ಯರ ಹೆಸರು	ಶ್ರೀ.ಹೆಚ್. ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು)
3	ವಿಷಯ	ರೇಷ್ಮೆ ಇಲಾಖೆಯಲ್ಲಿರುವ ಯೋಜನೆಗಳ ಬಗ್ಗೆ
4	ಉತ್ತರಿಸುವ ದಿನಾಂಕ	24-12-2021
5	ಉತ್ತರಿಸುವವರು	ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

	ಪ್ರಶ್ನೆಗಳು	ಉತ್ತರಗಳು
ಅ	ಪ್ರಸಕ್ತ ಸಾಲಿನಲ್ಲಿ ರೇಷ್ಮೆ ಇಲಾಖೆಯಲ್ಲಿರುವ ಯೋಜನೆಗಳಾವುವು;(ವಿವರ ನೀಡುವುದು)	ರೇಷ್ಮೆ ಇಲಾಖೆಯಲ್ಲಿ ಈ ಕೆಳಕಂಡ ಯೋಜನೆಗಳು ಜಾರಿಯಲ್ಲಿರುತ್ತದೆ. 1. ರೇಷ್ಮೆ ಅಭಿವೃದ್ಧಿ ಯೋಜನೆ. 2. ರೇಷ್ಮೆ ಕೃಷಿ ಅಭಿವೃದ್ಧಿಗೆ ನೂತನ ಕತೃರ್ತ್ವ ಶಕ್ತಿ ಮತ್ತು ಭಾಗೀದಾರರಿಗೆ ಸವಲತ್ತು 3. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ 4. ಬೆಲೆ ಸ್ಥಿರೀಕರಣ ನಿಧಿ ಅನುದಾನದಿಂದ ಅನುಷ್ಠಾನಗೊಳಿಸುವ ಕಾರ್ಯಕ್ರಮಗಳು. 5. ಕಟ್ಟಡ ಕಾಮಗಾರಿಗಳು ಯೋಜನೆ 6. ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆ 7. ಉತ್ಪಾದನೆ / ಉತ್ಪಾದಕತೆ ಆಧಾರಿತ ಪ್ರೋತ್ಸಾಹಧನ ಕಾರ್ಯಕ್ರಮ 8. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ. 9. ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ಹಿಪ್ಪುನೇರಳೆ ನರ್ಸರಿ / ತೋಟ ಸ್ಥಾಪನೆ, ತೋಟ ನಿರ್ವಹಣೆ ಮತ್ತು ಹಿಪ್ಪುನೇರಳೆ ಮರ ಕೃಷಿ ಪದ್ಧತಿ ಸ್ಥಾಪನೆ ಹಾಗೂ ನಿರ್ವಹಣೆ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದ್ದು, ರೈತರಿಗೆ ಕೂಲಿ/ಸಾಮಗ್ರಿ ವೆಚ್ಚವನ್ನು ಭರಿಸುವ ಮೂಲಕ ಗ್ರಾಮೀಣ ಪ್ರದೇಶದಲ್ಲಿ ಉದ್ಯೋಗವಕಾಶವನ್ನು ಕಲ್ಪಿಸಿ ಆರ್ಥಿಕ ಸದೃಢತೆಯನ್ನು ಒದಗಿಸುವ ಯೋಜನೆ.

ಆ	ರೇಷ್ಮೆ ಇಲಾಖೆ ಅಡಿಯಲ್ಲಿ ಬರುವ ನಿಗಮ ಮಂಡಳಿ, ಪ್ರಾಧಿಕಾರ, ಆಯೋಗ, ಅಕಾಡೆಮಿ, ಅಂಗಸಂಸ್ಥೆಗಳು ಯಾವುವು; ಯಾವ ಉದ್ದೇಶಕ್ಕಾಗಿ ಯಾವಾಗ ಸ್ಥಾಪನೆ ಮಾಡಲಾಗಿದೆ: (ವಿವರ ನೀಡುವುದು)	ರೇಷ್ಮೆ ಇಲಾಖೆಯಡಿ ಈ ಕೆಳಕಂಡ ನಿಗಮ / ಮಂಡಳಿ ಮತ್ತು ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. 1. ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ನಿಯಮಿತ 2. ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತ 3. ಕರ್ನಾಟಕ ರಾಜ್ಯ ರೇಷ್ಮೆ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ. **ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ** ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ನಿಯಮಿತವು ಕರ್ನಾಟಕ ಸರ್ಕಾರದ ಒಂದು ಉದ್ಯಮವಾಗಿದ್ದು, ರೇಷ್ಮೆ ವಿನಿಮಯ ಕೇಂದ್ರದ ಅನುಬಂಧ ಸಂಸ್ಥೆಯಾಗಿ 1979 ರಲ್ಲಿ ಸ್ಥಾಪನೆಯಾಗಿರುತ್ತದೆ. **ಉದ್ದೇಶ:** 1. ರೇಷ್ಮೆ ಬೆಲೆಗಳಲ್ಲಿ ಸ್ಥಿರತೆ ಕಾಯ್ದುಕೊಳ್ಳುವುದು. 2. ಮಾರುಕಟ್ಟೆ ಮಧ್ಯಪ್ರವೇಶ ಮಾಡಿ ರೈತರ ಮತ್ತು ರೀಲರುಗಳ ಹಿತ ಕಾಪಾಡುವುದು. 3. ನೇಕಾರರಿಗೆ ಉತ್ತಮ ಗುಣಮಟ್ಟದ ರೇಷ್ಮೆ ನೂಲನ್ನು ನಿರಂತರವಾಗಿ ನ್ಯಾಯಯುತ ಬೆಲೆಗಳಲ್ಲಿ ಸರಬರಾಜು ಮಾಡುವುದು. **ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತ** ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತವನ್ನು 1980 ರಲ್ಲಿ ಸ್ಥಾಪಿಸಲಾಯಿತು. **ಉದ್ದೇಶ:** ಸರ್ಕಾರಿ ನಿಯಂತ್ರಿತ ಮಾರುಕಟ್ಟೆಗಳ ಮೂಲಕ ರೈತರಿಂದ ರೇಷ್ಮೆಗೂಡುಗಳನ್ನು ಖರೀದಿಸಿ, ರೇಷ್ಮೆ ನೂಲನ್ನು ತೆಗೆದು, ಪಾರಂಪರಿಕ "ಮೈಸೂರು ಸಿಲ್ಕ್" ಸೀರೆಗಳು ಮತ್ತು ಇನ್ನಿತರ ರೇಷ್ಮೆ ಉತ್ಪನ್ನಗಳನ್ನು ಉತ್ಪಾದಿಸಿ ಮಾರಾಟ ಮಾಡುವುದು.